**All India Radio: Bangalore**
**National Bulletin In Kannada**
**19.03.2025 13.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**19.03.2025 13.10 p.m.**

****************

ಮುಖ್ಯಾಂಶಗಳು

೧. ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಲ್ಲಿ ಸಿಲುಕಿದ್ದ ಭಾರತೀಯ ಮೂಲದ ಗಗನಯಾನಿ ಸುನಿತಾ ವಿಲಿಯಮ್ಸ್, ಸಹ ಗಗನಯಾತ್ರಿ ಬುಚ್ ವಿಲ್ಮೋರ್ ಭೂಮಿಗೆ ಆಗಮನ; ೪೫ ದಿನಗಳ ಕಾಲ ಉಭಯರಿಗೆ ಪುನಶ್ಚೇತನ ಆರೈಕೆ

೨. ಸುನಿತಾ ವಿಲಿಯಮ್ಸ್ ಮರಳುವಿಕೆ: ಅಭಿನಂದನೆ ಸಲ್ಲಿಸಿದ ರಾಷ್ಟ್ರಪತಿ, ಪ್ರಧಾನಮಂತ್ರಿ, ಕೇಂದ್ರ ಸಚಿವರು

೩. ಪ್ರಸಕ್ತ ಹಣಕಾಸು ವರ್ಷದಲ್ಲಿ ಕೃಷಿ ಉತ್ಪನ್ನಗಳ ವಹಿವಾಟು ಶೇಕಡ ೧೩ರಷ್ಟು ಹೆಚ್ಚಳ

೪. ಕಬಡ್ಡಿ: ಇಂಗ್ಲೆಂಡ್‌ನ ವೊಲ್ವರ್‌ಹ್ಯಾಂಪ್ಟನ್‌ನಲ್ಲಿ ಕಬಡ್ಡಿ ವಿಶ್ವಕಪ್ ಪಂದ್ಯಾವಳಿಯಲ್ಲಿ, ಹಾಲಿ ಚಾಂಪಿಯನ್ ಭಾರತ ಹಾಗೂ ಸ್ಕಾಟ್ಲೆಂಡ್ ನಡುವಿನ ಪಂದ್ಯವು ಡ್ರಾನಲ್ಲಿ ಅಂತ್ಯ

****************

ಸುಮಾರು ೯ ತಿಂಗಳಿನಿಂದ ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಲ್ಲಿ (ಐಎಸ್‌ಎಸ್) ಸಿಲುಕಿದ್ದ ಭಾರತೀಯ ಮೂಲದ ಗಗನಯಾನಿ ಸುನಿತಾ ವಿಲಿಯಮ್ಸ್ ಮತ್ತು ಸಹ ಗಗನಯಾತ್ರಿ ಬುಚ್ ವಿಲ್ಮೋರ್ ಕಡೆಗೂ ಸುರಕ್ಷಿತವಾಗಿ ಭೂಮಿಗೆ ಮರಳಿದ್ದಾರೆ.

ಸಹ ಗಗನಯಾತ್ರಿಗಳಾದ ನಿಕ್ ಹೇಗ್ ಮತ್ತು ರಷ್ಯಾದ ಗಗನಯಾತ್ರಿ ಅಲೆಕ್ಸಾಂಡರ್ ಗೋರ್ಬುನೋವ್ ಒಳಗೊಂಡಂತೆ ಒಟ್ಟು ನಾಲ್ವರನ್ನು ಹೊತ್ತ 'ಸ್ಪೇಸೆಕ್ಸ್ ಕ್ರ್ಯೂ ಡ್ರ್ಯಾಗನ್' ಗಗನನೌಕೆ ಸುರಕ್ಷಿತವಾಗಿ ಇಂದು ಭಾರತೀಯ ಕಾಲಮಾನ ಬೆಳಗಿನ ಜಾವ ೩.೩೭ಕ್ಕೆ ಫ್ಲೋರಿಡಾ ಕರಾವಳಿಯಲ್ಲಿ ಇಳಿದಿದೆ. ಸ್ಪೇಸ್ ಎಕ್ಸ್‌ನ ಡ್ರ್ಯಾಗನ್ ನೌಕೆ ನಾಲ್ವರನ್ನೂ ಭೂಮಿಗೆ ವಾಪಸ್ ಕರೆತರುವಲ್ಲಿ ಯಶಸ್ವಿಯಾಗಿದೆ. ಬಳಿಕ ಹಡಗಿನ ಸಹಾಯದಿಂದ ಗಗನಯಾತ್ರಿಗಳನ್ನು ನೌಕೆಯಿಂದ ಹೊರತರಲಾಗಿದ್ದು, ನಾಲ್ವರೂ ಗಗನಯಾತ್ರಿಗಳು ಆರೋಗ್ಯವಾಗಿದ್ದಾರೆ.

ಗಗನನೌಕೆಯು ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಿಂದ ನಿನ್ನೆ ಬೆಳಗ್ಗೆ ೧೦.೩೦ಕ್ಕೆ ನಿರ್ಗಮಿಸಿತ್ತು. ಸುಮಾರು ೧೭ ಗಂಟೆಗಳ ಸುದೀರ್ಘ ಯಾನದ ಬಳಿಕ ಮುಂಜಾನೆ ೩.೩೭ಕ್ಕೆ 'ಕ್ರ್ಯೂ ಡ್ರ್ಯಾಗನ್' ಗಗನನೌಕೆ ಸಮುದ್ರಸ್ಪರ್ಶ ಮಾಡಿದೆ. ಇದಕ್ಕೂ ಮುನ್ನ ಗಗನನೌಕೆಯಲ್ಲಿ

ಅಳವಡಿಸಲಾಗಿರುವ ಪ್ಯಾರಾಶ್ಯೂಟ್‌ಗಳು ತೆರೆದುಕೊಂಡು ಗಗನನೌಕೆಯ ವೇಗವನ್ನು ತಗ್ಗಿಸುವ ಮೂಲಕ ಸುರಕ್ಷಿತವಾಗಿ ಅದು ಸಮುದ್ರಕ್ಕೆ ಬೀಳುವಂತೆ ಮಾಡಲಾಯಿತು.

ವಿಲಿಯಮ್ಸ್ ಮತ್ತು ವಿಲ್ಮೋರ್ ಜೂನ್ ೫, ೨೦೨೪ ರಂದು ಬೋಯಿಂಗ್‌ನ ಸ್ಟಾರ್‌ಲೈನರ್ ಬಾಹ್ಯಾಕಾಶ ನೌಕೆಯಲ್ಲಿ ಬಾಹ್ಯಾಕಾಶಕ್ಕೆ ತೆರಳಿದ್ದರು. ಆದರೆ ಪ್ರೊಪಲ್ಷನ್ ಸಿಸ್ಟಮ್ ಅಸಮರ್ಪಕ ಕಾರ್ಯನಿರ್ವಹಣೆ ಸೇರಿದಂತೆ ತಾಂತ್ರಿಕ ಸಮಸ್ಯೆಗಳಿಂದ ಅವರ ಸಕಾಲಿಕ ಮರಳುವಿಕೆ ವಿಳಂಬವಾಯಿತು. ಸೆಪ್ಟೆಂಬರ್ ೨೦೨೪ರಲ್ಲಿ ಸ್ಟಾರ್‌ಲೈನರ್ ಅನ್ನು ಸುರಕ್ಷತೆ ದೃಷ್ಟಿಯಿಂದ ಸಿಬ್ಬಂದಿಯಿಲ್ಲದೆಯೇ ಭೂಮಿಗೆ ವಾಪಾಸ್ ಕರೆಸಿಕೊಳ್ಳಲಾಯಿತು. ಕೊನೆಯ ಆಯ್ಕೆಯೆಂಬಂತೆ, ಐಎಸ್‌ಎಸ್‌ನಲ್ಲಿ ಸಿಲುಕಿದ ಸುನಿತಾ ಮತ್ತು ವಿಲ್ಮೋರ್ ಅವರನ್ನು ಭೂಮಿಗೆ ಕರೆಸಿಕೊಳ್ಳಲು ಉದ್ಯಮಿ ಎಲಾನ್ ಮಸ್ಕ್ ಒಡೆತನದ 'ಸ್ಪೇಸೆಕ್ಸ್' ಜತೆ ನಾಸಾ ಕೈಜೋಡಿಸಿತು. ಈ ಕಾರ್ಯಾಚರಣೆ ಈಗ ಯಶಸ್ವಿಯಾಗಿ ಪೂರ್ಣಗೊಂಡಿದೆ.

ಸುನೀತಾ ವಿಲಿಯಮ್ಸ್, ಸಹ ಗಗನಯಾತ್ರಿಗಳಾದ ಬುಚ್ ವಿಲ್ಮೋರ್, ನಿಕ್ ಹೇಗ್, ಅಲೆಕ್ಸಾಂಡರ್ ಗೋರ್ಬುನೋವ್ ಸುರಕ್ಷಿತವಾಗಿ ಭೂಮಿಗೆ ಮರಳಿದ್ದಾರೆ.

ಸುನಿತಾ ವಿಲಿಯಮ್ಸ್ ಅವರು ಭೂಮಿಗೆ ವಾಪಸ್ಸಾಗಿರುವುದಕ್ಕೆ ಭಾರತೀಯರು ಸಂತಸ ವ್ಯಕ್ತಪಡಿಸುತ್ತಿದ್ದು, ಅದರಲ್ಲಿಯೂ ಸುನಿತಾ ಅವರ ಪೂರ್ವಜರ ಊರು ಗುಜರಾತಿನ ಮೆಹ್ಸಾನ ಜಿಲ್ಲೆಯಲ್ಲಿರುವ ಝುಲಪನ್‌ನಲ್ಲಿ ಸಂಭ್ರಮ ಮುಗಿಲು ಮುಟ್ಟಿದೆ.

ಸುನಿತಾ ತಂದೆ ದೀಪಕ್ ಪಾಂಡ್ಯ ಪೂರ್ವಜರ ಊರು ಝುಲಾಸನ್ ಗ್ರಾಮಸ್ಥರು ಅವರ ಸುರಕ್ಷತೆಗಾಗಿ ದೇವಸ್ಥಾನಗಳಲ್ಲಿ ಜ್ಯೋತಿ ಬೆಳಗಿಸಿ ಪ್ರಾರ್ಥನೆ ಸಲ್ಲಿಸಿದ್ದರು. ಇದೀಗ ಸುನಿತಾ ಅವರು ಮರಳಿರುವುದಕ್ಕೆ ಸಂಭ್ರಮವನ್ನಾಚರಿಸುತ್ತಿದ್ದಾರೆ.

ಸುನೀತಾ ವಿಲಿಯಮ್ಸ್ ಅವರು ಭೂಮಿಗೆ ಮರಳಿದ ಹಿನ್ನೆಲೆಯಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು, ಪ್ರಧಾನಮಂತ್ರಿ ನರೇಂದ್ರ ಮೋದಿ, ರಕ್ಷಣಾ ಸಚಿವ ರಾಜನಾಥ್ ಸಿಂಗ್ ಮತ್ತು ವಿಜ್ಞಾನ ಮತ್ತು ತಂತ್ರಜ್ಞಾನ ಖಾತೆ ರಾಜ್ಯ ಸಚಿವ ಜಿತೇಂದ್ರ ಸಿಂಗ್ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಇದೊಂದು ವೈಭವದ ಕ್ಷಣ. ಈ ಶ್ರೇಷ್ಠ ಪುತ್ರಿಯ ಸುರಕ್ಷಿತ ಮರಳುವಿಕೆಯನ್ನು ಇಡೀ ಜಗತ್ತು ಆಚರಿಸುತ್ತಿದೆ ಎಂದು ತಿಳಿಸಲಾಗಿದೆ.

****************

ನಾಸಾ ಗಗನಯಾತ್ರಿಗಳಾದ ಸುನೀತಾ ವಿಲಿಯಮ್ಸ್ ಮತ್ತು ಬುಚ್ ವಿಲ್ಮೋರ್ ಅವರು ಒಂಬತ್ತು ತಿಂಗಳು ಬಾಹ್ಯಾಕಾಶದಲ್ಲಿ ಕಳೆದ ನಂತರ ಭೂಮಿಯ ಗುರುತ್ವಾಕರ್ಷಣೆಗೆ ಹೊಂದಿಕೊಳ್ಳಲು ಸಹಾಯ ಮಾಡಲು ೪೫ ದಿನಗಳ ಕಾಲ ವಿಶೇಷ ಆರೈಕೆ ಕಾರ್ಯಕ್ರಮ ಆಯೋಜಿಸಲಾಗಿದೆ.

ಅಂತರರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಲ್ಲಿ ತಮ್ಮ ವಿಸ್ತೃತ ವಾಸ್ತವ್ಯದ ನಂತರ, ಗಗನಯಾತ್ರಿಗಳು ದೀರ್ಘಕಾಲದ ತೂಕವಿಲ್ಲದಿರುವಿಕೆಯ ಪರಿಣಾಮಗಳನ್ನು ಎದುರಿಸಲು ದೈಹಿಕ ಪುನಶ್ಚೇತನಕ್ಕೆ ಒಳಗಾಗುತ್ತಾರೆ.

ಬಾಹ್ಯಾಕಾಶದಿಂದ ಹಿಂತಿರುಗುವ ಗಗನಯಾತ್ರಿಗಳು ಆಗಾಗ್ಗೆ ದೈಹಿಕ ಬದಲಾವಣೆಗಳನ್ನು ಅನುಭವಿಸುತ್ತಾರೆ, ಇದರಲ್ಲಿ ದ್ರವ ಬದಲಾವಣೆಗಳು ಮುಖಗಳು ಉಬ್ಬುವುದು, ಸ್ನಾಯು ಕ್ಷೀಣತೆ, ತಾತ್ಕಾಲಿಕ ಎತ್ತರ ಹೆಚ್ಚಳ ಮತ್ತು ಕಡಿಮೆ ಮೂಳೆ ಸಾಂದ್ರತೆ ಸೇರಿವೆ.

ಸೂಕ್ಷ್ಮಗುರುತ್ವವು ಗಗನಯಾತ್ರಿಯ ದೇಹದ ವಿವಿಧ ಅಂಶಗಳ ಮೇಲೆ ಪರಿಣಾಮ ಬೀರುತ್ತದೆ, ಇದರಲ್ಲಿ ಏರೋಬಿಕ್ ಸಾಮರ್ಥ್ಯ, ಸ್ನಾಯು ಶಕ್ತಿ, ಸಹಿಷ್ಣುತೆ, ಸಮನ್ವಯ, ಮೂಳೆ ಸಾಂದ್ರತೆ ಮತ್ತು ನರ ವೆಸ್ಟಿಬುಲರ್ ಕಾರ್ಯ ಸೇರಿವೆ.

ಪುನಶ್ಚೇತನ ಪ್ರಕ್ರಿಯೆಯು ಏಳು ದಿನಗಳಿಂದ ೪೫ ದಿನಗಳವರೆಗೆ ಇರುತ್ತದೆ. ಪರೀಕ್ಷಾ ಫಲಿತಾಂಶಗಳು, ವೈದ್ಯಕೀಯ ಸ್ಥಿತಿ ಮತ್ತು ಮಿಷನ್ ಪಾತ್ರಗಳ ಆಧಾರದ ಮೇಲೆ ಈ ಕಾರ್ಯಕ್ರಮವನ್ನು ಪ್ರತಿ ಗಗನಯಾತ್ರಿಗಳಿಗೆ ಕಸ್ಟಮೈಸ್ ಮಾಡಲಾಗಿದೆ.

ಪುನರ್ವಸತಿಯನ್ನು ಮೂರು ಹಂತಗಳಾಗಿ ವಿಂಗಡಿಸಲಾಗಿದೆ. ಮೊದಲ ಹಂತವು ಇಳಿಯುವ ದಿನದಂದು ಪ್ರಾರಂಭವಾಗುತ್ತದೆ ಮತ್ತು ಚಲನಶೀಲತೆ, ನಮ್ಯತೆ ಮತ್ತು ಸ್ನಾಯುಗಳನ್ನು ಬಲಪಡಿಸುವ ಮೇಲೆ ಕೇಂದ್ರೀಕರಿಸುತ್ತದೆ. ಎರಡನೇ ಹಂತವು ಪ್ರೊಪ್ರಿಯೋಸೆಪ್ಟಿವ್ ವ್ಯಾಯಾಮಗಳು ಮತ್ತು ಹೃದಯರಕ್ತನಾಳದ ತರಬೇತಿಯನ್ನು ಒಳಗೊಂಡಿದೆ, ಮೂರನೇ ಮತ್ತು ದೀರ್ಘ ಹಂತವು ಕ್ರಿಯಾತ್ಮಕ ಅಭಿವೃದ್ಧಿಗೆ ಆದ್ಯತೆ ನೀಡುತ್ತದೆ.

ಸುಮಾರು ಎರಡು ತಿಂಗಳ ನಂತರ ಸುನಿತಾ ವಿಲಿಯಮ್ಸ್ ಮತ್ತು ಬುಚ್ ವಿಲ್ಮೋರ್ ಸಾಮಾನ್ಯ ಸ್ಥಿತಿಗೆ ಮರುಳಬಹುದು ಎಂದು ತಜ್ಞರು ಹೇಳಿದ್ದಾರೆ.

****************

ಪ್ರಸಕ್ತ ಹಣಕಾಸು ವರ್ಷದಲ್ಲಿ ಏಪ್ರಿಲ್-ಫೆಬ್ರವರಿ ಅವಧಿಯಲ್ಲಿ ಭಾರತದ ಕೃಷಿ ಮತ್ತು ಸಂಸ್ಕರಿಸಿದ ಆಹಾರ ಉತ್ಪನ್ನಗಳ ರಫ್ತು ಹಿಂದಿನ ವರ್ಷದ ಇದೇ ಅವಧಿಗೆ ಹೋಲಿಸಿದರೆ ಶೇ.೧೩ ರಷ್ಟು ಏರಿಕೆಯಾಗಿದೆ.

ಒಟ್ಟಾರೆಯಾಗಿ ೨೨.೬೭ ಶತಕೋಟಿ ಡಾಲರ್‌ಗೆ ತಲುಪಿದೆ, ಇದು ಕೃಷಿ ಕ್ಷೇತ್ರದ ಬಲವಾದ ಕಾರ್ಯಕ್ಷಮತೆಗೆ ಸಾಕ್ಷಿಯಾಗಿದೆ.

ವಾಣಿಜ್ಯ ನಿರ್ದೇಶನಾಲಯ ಸಂಗ್ರಹಿಸಿದ ಮಾಹಿತಿಯ ಪ್ರಕಾರ, ಬಾಸ್ಮತಿ ಮತ್ತು ಬಾಸ್ಮತಿಯೇತರ ಪ್ರಭೇದಗಳು ಸೇರಿದಂತೆ ಅಕ್ಕಿ ರಫ್ತು ೧೧ ತಿಂಗಳ ಅವಧಿಯಲ್ಲಿ ಶೇಕಡ ೨೧ ರಷ್ಟು ಏರಿಕೆಯಾಗಿ ೧೧

ಶತಕೋಟಿ ಡಾಲರ್ ತಲುಪಿದ್ದು, ಕಳೆದ ವರ್ಷದ ಇದೇ ಅವಧಿಯಲ್ಲಿ ಇದು ೯.೩೨ ಶತಕೋಟಿ ಡಾಲರ್ ಆಗಿತ್ತು.

***************

ಭಾರತ ಮತ್ತು ಮಾಲ್ಡೀವ್ಸ್ ದ್ವಿಪಕ್ಷೀಯ ವ್ಯಾಪಾರ ವಹಿವಾಟು ಒಪ್ಪಂದಕ್ಕೆ ಸಹಿ ಹಾಕಿದ್ದು, ಏಷ್ಯನ್ ಕ್ಲಿಯರಿಂಗ್ ಯೂನಿಯನ್ ಕಾರ್ಯವಿಧಾನದ ಜೊತೆಗೆ ಭಾರತೀಯ ರೂಪಾಯಿ ಮತ್ತು ಮಾಲ್ಡೀವಿಯನ್ ರುಫಿಯಾ ವಹಿವಾಟಿ ನಡೆಸಲು ಒಪ್ಪಿಗೆ ಸೂಚಿಸಲಾಗಿದೆ.

ಭಾರತೀಯ ರಿಸರ್ವ್ ಬ್ಯಾಂಕ್ ಈ ನಿಟ್ಟಿನಲ್ಲಿ ಸುತ್ತೋಲೆಯನ್ನು ಹೊರಡಿಸಿದೆ. ಭಾರತವು ಮಾಲ್ಡೀವ್ಸ್‌ನ ಅತಿದೊಡ್ಡ ವ್ಯಾಪಾರ ಪಾಲುದಾರನಾಗಿದ್ದು, ದ್ವಿಪಕ್ಷೀಯ ವಹಿವಾಟು ೫೪೮ ಮಿಲಿಯನ್ ಅಮೆರಿಕನ್ ಡಾಲರ್ ಗುರಿ ದಾಟುವ ನಿರೀಕ್ಷೆ ಇದೆ.

***************

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಇಂದು ಸಿಆರ್‌ಪಿಎಫ್ ದಿನ ೨೦೨೫ ರ ಅಂಗವಾಗಿ ಕೇಂದ್ರ ಮೀಸಲು ಪೊಲೀಸ್ ಪಡೆ (ಸಿಆರ್‌ಪಿಎಫ್) ಸಿಬ್ಬಂದಿಗೆ ಶುಭಾಶಯ ಕೋರಿದ್ದಾರೆ.

ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಸಚಿವರು ಸಂದೇಶ ನೀಡಿದ್ದಾರೆ.

೧೯೫೦ ರಲ್ಲಿ ಕೇಂದ್ರ ಮೀಸಲು ಪೊಲೀಸ್ ಪಡೆಗೆ ರಾಷ್ಟ್ರಪತಿಗಳ ಪದಕ ನೀಡಿ ಗೌರವಿಸಲಾದ ದಿನ ಇದಾಗಿದೆ ಎಂದು ಹೇಳಿದ್ದಾರೆ.

ನಮ್ಮ ಸಿಆರ್‌ಪಿಎಫ್ ಯೋಧರ ಶೌರ್ಯ ಮತ್ತು ತ್ಯಾಗವು ದೇಶಭಕ್ತರ ಪೀಳಿಗೆಗೆ ಸ್ಫೂರ್ತಿ ನೀಡುತ್ತಲೇ ಇದೆ ಎಂದು ಅವರು ಹೇಳಿದರು. ರಾಷ್ಟ್ರಕ್ಕಾಗಿ ತಮ್ಮ ಪ್ರಾಣವನ್ನೇ ಅರ್ಪಿಸಿದ ಯೋಧರಿಗೆ ಇಡೀ ದೇಶದ ನಾಗರಿಕರ ಪರವಾಗಿ ನಮನಗಳನ್ನು ಸಲ್ಲಿಸುತ್ತೇನೆ ಎಂದು ಅಮಿತ್ ಶಾ ಸಂದೇಶದಲ್ಲಿ ತಿಳಿಸಿದ್ದಾರೆ.

***************

ಇಂಗ್ಲೆಂಡ್‌ನ ವೊಲ್ವರ್‌ಹ್ಯಾಂಪ್ಟನ್‌ನಲ್ಲಿ ಕಳೆದ ರಾತ್ರಿ ನಡೆದ ಕಬಡ್ಡಿ ವಿಶ್ವಕಪ್ ಪಂದ್ಯದಲ್ಲಿ, ಹಾಲಿ ಚಾಂಪಿಯನ್ ಭಾರತದ ಪುರುಷರ ತಂಡ ಹಾಗೂ ಸ್ಕಾಟ್ಲೆಂಡ್ ನಡುವಿನ ಪಂದ್ಯವು ೬೪-೬೪ ಅಂಕಗಳೊಂದಿಗೆ ಡ್ರಾದಲ್ಲಿ ಕೊನೆಗೊಂಡಿತು.

ಭಾರತವು ಬಲಿಷ್ಠವಾಗಿ ಆಟ ಆರಂಭಿಸಿ, ಮೊದಲ ಕೆಲವು ನಿಮಿಷಗಳಲ್ಲಿ ಮುನ್ನಡೆ ಸಾಧಿಸಿತು. ಆದರೆ ನಂತರದಲ್ಲಿ ಸ್ಕಾಟ್ಲೆಂಡ್ ಬಲಿಷ್ಠವಾಗಿ ತಿರುಗೇಟು ನೀಡಿತು.

***************

ಸ್ವಿಟ್ಜರ್‌ಲ್ಯಾಂಡ್‌ನ ಬಾಸೆಲ್‌ನಲ್ಲಿ ನಡೆಯುತ್ತಿರುವ ಸ್ವಿಸ್ ಓಪನ್ ಬ್ಯಾಡ್ಮಿಂಟನ್‌ನಲ್ಲಿ ಮಹಿಳೆಯರ ಡಬಲ್ಸ್‌ನಲ್ಲಿ ಭಾರತದ ತ್ರೀಸಾ ಜಾಲಿ ಮತ್ತು ಗಾಯತ್ರಿ ಗೋಪಿಚಂದ್ ಜೋಡಿ ಎರಡನೇ ಸುತ್ತಿಗೆ ಮುನ್ನಡೆದಿದೆ.

ಭಾರತದ ಈ ಜೋಡಿ ಸ್ವಿಟ್ಜರ್‌ಲ್ಯಾಂಡ್‌ನ ಅಲೈನ್ ಮುಲ್ಲರ್ ಮತ್ತು ನೆದರ್‌ಲ್ಯಾಂಡ್ಸ್‌ನ ಕೆಲ್ಲಿ ವ್ಯಾನ್ ಬುಯಿಟೆನ್ ವಿರುದ್ಧ ೨೧-೧೬, ೨೧-೧೭ ಅಂಕಗಳ ಅಂತರದಲ್ಲಿ ಪರಾಭವಗೊಳಿಸಿತು.

***************

ವಿದೇಶಾಂಗ ಸಚಿವ ಎಸ್.ಜೈಶಂಕರ್ ಅವರು ಬ್ರಿಟನ್‌ನ ರಾಷ್ಟ್ರೀಯ ಭದ್ರತಾ ಸಲಹೆಗಾರ ಜೊನಾಥನ್ ಪೊವೆಲ್ ಅವರೊಂದಿಗೆ ಸಭೆ ನಡೆಸಿದರು.

ದ್ವಿಪಕ್ಷೀಯ, ಪ್ರಾದೇಶಿಕ ಮತ್ತು ಜಾಗತಿಕ ಭದ್ರತಾ ವಿಷಯಗಳ ಕುರಿತು ಉಭಯ ನಾಯಕರು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಂಡರು.

********ಮುಕ್ತಾಯ*******